All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

18.02.2026 2.30 p.m.

<><><><>

ಮುಖ್ಯಾಂಶಗಳು

- ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ೩೦ ಕೋಟಿ ೩೪ ಲಕ್ಷ ರೂಪಾಯಿ ಲಾಭಾಂಶ ನೀಡಿದ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ
- ಜೈಲಿಗೆ ಆಗಮಿಸುವ, ತೆರಳುವ ಖೈದಿಗಳಿಗೆ ಎನ್‌ಡಿಪಿಎಸ್ ತಪಾಸಣೆ ಕಡ್ಡಾಯ - ಕಾರಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ಸ್ಪಷ್ಟನೆ
- ನಿಯಮ ಮೀರಿ ಕಾಂಗ್ರೆಸ್ ಕಚೇರಿಗೆ ಸಿಎ ನಿವೇಶನ ಪಡೆದ ಆರೋಪ - ಸರ್ಕಾರದ ವಿರುದ್ಧ ಹೋರಾಟ ನಡೆಸಲು ಬಿಜೆಪಿ ನಿರ್ಧಾರ
- ಬೆಂಗಳೂರಿನಲ್ಲಿ ಪಾಲಿಕೆ ಅಧಿಕಾರಿಗಳಿಂದ ದಾಳಿ ಶುಚಿತ್ವ ಕಾಪಾಡದ ಹೋಟೆಲ್‌ಗೆ ೧ ಲಕ್ಷ ರೂಪಾಯಿ ದಂಡ
- ರಣಜಿ ಟ್ರೋಫಿ ಸೆಮಿಫೈನಲ್ ಪಂದ್ಯ ; ಉತ್ತರಾಖಂಡ ವಿರುದ್ಧ ಕರ್ನಾಟಕಕ್ಕೆ ೬೦೦ಕ್ಕೂ ಅಧಿಕ ರನ್‌ಗಳ ಮುನ್ನಡೆ

<><><><>

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ ವತಿಯಿಂದ ೩೦ ಕೋಟಿ ೩೪ ಲಕ್ಷದ ೭೮ ಸಾವಿರದ ೫೦೦ ರೂಪಾಯಿ ಮೊತ್ತದ ಡಿವಿಡೆಂಡ್ ನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಇಂದು ನೀಡಲಾಯಿತು. ಸರ್ಕಾರದ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಡಿವಿಡೆಂಡ್ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಸಚಿವರಾದ ವೆಂಕಟೇಶ್, ಚಲುವರಾಯಸ್ವಾಮಿ, ಕೃಷ್ಣಬೈರೇಗೌಡ, ನಿಗಮದ ಅಧ್ಯಕ್ಷರು ಸೇರಿ ಹಲವರು ಉಪಸ್ಥಿತರಿದ್ದರು. ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ೨೦೨೬-೨೭ನೇ ಸಾಲಿನ ಆಯ-ವ್ಯಯಕ್ಕೆ ಸಂಬಂಧಪಟ್ಟಂತೆ ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ.

<><><><>

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ ಜಯಮಾಲ ಮತ್ತು ಮಂಡಳಿಯ ನಿಯೋಗದ ಸದಸ್ಯರು ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಚಲನಚಿತ್ರ ವಾಣಿಜ್ಯ ಮಂಡಳಿಯ ಕುರಿತು ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಚಲನಚಿತ್ರ ವಾಣಿಜ್ಯ ಮಂಡಳಿಯ ಉಪಾಧ್ಯಕ್ಷ ಸುಂದರ್ ರಾಜ್, ಖಜಾಂಚಿ ಜಯಸಿಂಹ ಮುಸುರಿ ಸೇರಿದಂತೆ ಮತ್ತಿತರರು ಇದ್ದರು.

<><><><>

ಜೈಲಿನ ಒಳಗೆ ಬರುವ ಮತ್ತು ಹೊರಗಡೆ ಹೋಗುವ ಕೈದಿಗಳಿಗೆ ಎನ್‌ಡಿಪಿಎಸ್ ತಪಾಸಣೆ ನಡೆಸಲಾಗುತ್ತದೆ ಎಂದು ಕಾರಾಗೃಹ ಇಲಾಖೆ ಡಿಜಿಪಿ ಅಲೋಕ್ ಕುಮಾರ್ ತಿಳಿಸಿದ್ದಾರೆ. ಹುಬ್ಬಳ್ಳಿಯ ಉಪಕಾರಾಗೃಹಕ್ಕೆ ಇಂದು ದಿಢೀರ್ ಭೇಟಿ ನೀಡಿದ ಅವರು ಜೈಲಿನ ಕಾರ್ಯವೈಖರಿ ಬಗ್ಗೆ ಪರಿಶೀಲನೆ ನಡೆಸಿದರು. ಸಬ್ ಜೈಲ್ ಕಟ್ಟಡ, ಗಾರ್ಡನ್, ಖೈದಿಗಳಿಗೆ ಇರುವ ವ್ಯವಸ್ಥೆ ಕುರಿತು ಮಾಹಿತಿ ಪಡೆದರು. ಖೈದಿಗಳ ಕೊಠಡಿ ಪರಿಶೀಲನೆ ನಡೆಸಿ ಅವರೊಂದಿಗೆ ಮಾತುಕತೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಎನ್‌ಡಿಪಿಎಸ್ ತಪಾಸಣೆ ನಡೆಸುವುದರಿಂದ ಜೈಲಿನಲ್ಲಿಯೂ ಮಾದಕ ವಸ್ತು ಸರಬರಾಜು ಆಗುತ್ತಿರುವುದನ್ನು ಪತ್ತೆ ಹಚ್ಚಲಾಗುವದು ಎಂದು ಹೇಳಿದ್ದಾರೆ. ಹುಬ್ಬಳ್ಳಿಯ ಕಾರಾಗೃಹದಲ್ಲಿ ೧೩೭ ಖೈದಿಗಳಿದ್ದು, ಇದರಲ್ಲಿ ಅತೀ ಹೆಚ್ಚು ಕೊಲೆ ಪ್ರಕರಣಗಳ ಖೈದಿಗಳೇ ಆಗಿದ್ದಾರೆ. ಬಿಡುಗಡೆ ಬಳಿಕ ಅವರ ಜೀವನಕ್ಕೆ ಸಹಕಾರಿಯಾಗಲು ಖೈದಿಗಳಿಗೆ ಕೌಶಾಲ್ಯಭಿವೃದ್ಧಿ ತರಬೇತಿ ನೀಡಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಅಲೋಕ್ ಕುಮಾರ್**

<><><>

ರಾಜ್ಯ ಸರ್ಕಾರ ಬಡವರಿಗೆ ಭೂಮಿ, ಮನೆ ನೀಡದೇ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ತಾನೇ ಭೂಮಿ ಕಬಳಿಸುತ್ತಿದೆ ಎಂದು ಪ್ರತಿಪಕ್ಷ ಬಿಜೆಪಿ ಆರೋಪಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ತುಮಕೂರು, ಚಾಮರಾಜನಗರ, ಉಡುಪಿ, ದಕ್ಷಿಣಕನ್ನಡ ಸೇರಿದಂತೆ ಎಲ್ಲಾ ಕಡೆ ನಿಯಮ ಮೀರಿ ಕಾಂಗ್ರೆಸ್ ಕಚೇರಿಗೆ ಸಿಎ ನಿವೇಶನ ಪಡೆಯಲಾಗಿದೆ ಎಂದು ಆರೋಪಿಸಿದೆ. ಮೂಲ ಬೆಲೆಯ ಕೇವಲ ಶೇಕಡ ೫ರಷ್ಟು ಹಣ ನೀಡಿ, ಪ್ರತಿ ಜಿಲ್ಲೆಯಲ್ಲಿ ಬೆಲೆ ಬಾಳುವ ನಿವೇಶನ ಪಡೆಯಲಾಗಿದೆ. ಒಟ್ಟು ೩೧ ಕಡೆ ಭೂಮಿ ಒತ್ತುವರಿ ಮಾಡಲಾಗಿದೆ. ४೦ ಕೋಟಿ ಬೆಲೆ ಬಾಳುವ ಆಸ್ತಿಯನ್ನು ೨ ಕೋಟಿಗೆ ಪಡೆಯಲಾಗಿದೆ. ಈ ಬಗ್ಗೆ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ಎಚ್ಚರಿಕೆ ನೀಡಿದೆ.

<><><>

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಜಯನಗರದಲ್ಲಿ ಶುಚಿತ್ವ ಕಾಪಾಡದ ಹೋಟೆಲ್‌ಗೆ ಪಾಲಿಕೆ ೧ ಲಕ್ಷ ರೂಪಾಯಿ ದಂಡ ವಿಧಿಸಿದೆ. ಹಸಿಕಸ, ಒಣಕಸ ಬೇರ್ಪಡಿಸದೆ ಘನತ್ಯಾಜ್ಯ ನಿರ್ವಹಣೆ ಸರಿಯಾಗಿ ಮಾಡದೆ ಇರುವುದರಿಂದ ಘನತ್ಯಾಜ್ಯ ವಿಭಾಗ ದಾಳಿ ನಡೆಸಿದೆ. ದಾಳಿಯ ವೇಳೆ ಶುಚಿತ್ವ ಕಾಪಾಡದೇ ಘನತ್ಯಾಜ್ಯ ನಿರ್ವಹಣೆ ಮಾಡದಿರುವುದಕ್ಕೆ ದಂಡ ವಿಧಿಸಲಾಗಿದೆ. ಘನತ್ಯಾಜ್ಯ ನಿರ್ವಹಣೆ ಕುರಿತು ಅರಿವು ಮೂಡಿಸಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಎಚ್ಚರಿಕೆ ನೀಡಿದೆ.

<><><>

ಭಾರತೀಯ ಸೇನೆಯಲ್ಲಿ ಅಗ್ನಿಪಥ್ ಯೋಜನೆಯಡಿ ೨೦೨೭ನೇ ಸಾಲಿನ ಅಗ್ನಿವೀರ್ ನೇಮಕಾತಿಗಾಗಿ ದಾವಣಗೆರೆ ಸೇರಿದಂತೆ ರಾಜ್ಯದ ಒಟ್ಟು ೧೧ ಜಿಲ್ಲೆಗಳ ಅವಿವಾಹಿತ ಪುರುಷ

ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಾವಣಗೆರೆ, ಶಿವಮೊಗ್ಗ, ಬಾಗಲಕೋಟೆ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಗದಗ, ಉಡುಪಿ, ಹಾವೇರಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಯುವಕರು ಈ ಪರೀಕ್ಷೆಯಲ್ಲಿ ಭಾಗವಹಿಸಲು ಅರ್ಹರಾಗಿದ್ದಾರೆ. ಆಸಕ್ತ ಅಭ್ಯರ್ಥಿಗಳು ಭಾರತೀಯ ಸೇನೆಯ ಅಧಿಕೃತ ಪೋರ್ಟಲ್ www.joinindianarmy.nic.in ಮೂಲಕ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು.

<><><><>

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಮಹಾ ಶಿವರಾತ್ರಿ ರಥೋತ್ಸವವು ಇಂದು ಬೆಳಗ್ಗೆ ವಿಜೃಂಭಣೆಯಿಂದ ನಡೆಯಿತು. ರಾಜ್ಯದ ನಾನಾಭಾಗದಿಂದ ಹಾಗೂ ತಮಿಳುನಾಡಿನಿಂದಲೂ ಬಂದಿದ್ದ ಸಹಸ್ರಾರು ಭಕ್ತರು ಜಯಘೋಷಗಳನ್ನು ಕೂಗುತ್ತಾ ಹಣ್ಣು-ದವಸ-ಧಾನ್ಯವನ್ನು ತೇರಿಗೆ ಎಸೆದು ಪ್ರಾರ್ಥನೆ ಸಲ್ಲಿಸಿದರು. ಕಳೆದ ೪ ದಿನಗಳಿಂದ ಜಾತ್ರೆ ನಡೆಯುತ್ತಿದ್ದು ಚಾಮರಾಜನಗರ ಜಿಲ್ಲಾಡಳಿತ ಅಗತ್ಯ ಮೂಲ ಸೌಕರ್ಯ, ಪೊಲೀಸ್ ಬಿಗಿ ಭದ್ರತೆ ಮತ್ತು ಭಕ್ತರ ಸುರಕ್ಷತೆಗಾಗಿ ಮುನ್ನೆಚ್ಚರಿಕೆ ಕ್ರಮ ಕೈಗೊಂಡಿತ್ತು.

<><><><>

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಆಶ್ರಯದಲ್ಲಿ ಇದೇ ೧೦ ರಿಂದ ೧೬ ರವರೆಗೆ ಒಂದು ವಾರ ರಾಷ್ಟ್ರೀಯ ಭಾವೈಕ್ಯತಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಇದೇ ೧೦ ರಂದು ಸಂಜೆ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಶಿಬಿರ ಉದ್ಘಾಟಿಸಲಿದ್ದಾರೆ. ವಿಪತ್ತು ನಿರ್ವಹಣೆ, ಸ್ವಚ್ಛತಾ ಅಭಿಯಾನ, ವಸ್ತು ಪ್ರದರ್ಶನ, ತ್ಯಾಜ್ಯ ಸಂಸ್ಕರಣ ಘಟಕದ ವೀಕ್ಷಣೆ, ಕೌಶಲ್ಯಾಭಿವೃದ್ಧಿ, ಸೈಬರ್ ಭದ್ರತೆ, ಕ್ಯಾನ್ಸರ್ ಜಾಗೃತಿ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಯುವಶಕ್ತಿಯ ಪಾತ್ರದ ಕುರಿತ ಕಾರ್ಯಾಗಾರ. ಕರ್ನಾಟಕದ ಜಲಿಯನ್ ವಾಲಾ ಬಾಗ್ ಎಂದೇ ಕರೆಯಲ್ಪಡುವ ವಿದುರಾಶ್ವತ್ಥ ಹುತಾತ್ಮ ಸ್ಮಾರಕ ಸ್ಥಳಕ್ಕೆ ಕ್ಷೇತ್ರ ಭೇಟಿ ಸೇರಿದಂತೆ ಅನೇಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

<><><><>

ಕಾಡುಗಳನ್ನು ಬೆಂಕಿಯಿಂದ ರಕ್ಷಿಸಲು ಹಲವು ವಿನೂತನ ಕ್ರಮಗಳನ್ನು ಅರಣ್ಯ ಇಲಾಖೆ ಕೈಗೊಂಡಿದೆ ಎಂದು ಚಿಕ್ಕಮಗಳೂರು ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ರಮೇಶ್ ಬಾಬು ತಿಳಿಸಿದ್ದಾರೆ. ಚಿಕ್ಕಮಗಳೂರು ಅರಣ್ಯ ವಿಭಾಗದಲ್ಲಿ ೧೩೦ ಕಿಲೋ ಮೀಟರ್ ಹೊಸ ಬೆಂಕಿ ಪಥ ಸೇರಿ ಒಟ್ಟು ೯೭೦ ಕಿಲೋ ಮೀಟರ್ ಬೆಂಕಿ ಪಥ ನಿರ್ಮಿಸಲಾಗಿದೆ. ಹೊಸದಾಗಿ ೫೫ ಬೆಂಕಿ ವೀಕ್ಷಣ ಸಿಬ್ಬಂದಿ ನೇಮಕ ಮಾಡಿಕೊಳ್ಳಲಾಗಿದ್ದು ಬೆಂಕಿ ಅವಘಡಗಳ ಬಗ್ಗೆ ನಿಗಾ ವಹಿಸಲಾಗಿದೆ. ಜಿಲ್ಲೆಯಾದ್ಯಂತ ಅರಣ್ಯ ಇಲಾಖೆಯು ಬೆಂಕಿ ತಡೆಗೆ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು

ನಡೆಸುತ್ತಿದೆ. ಬೆಂಕಿ ಬೀಳುವುದನ್ನು ತಡೆಯಲು ಮತ್ತು ಅರಣ್ಯ ರಕ್ಷಿಸಲು ಇಲಾಖೆ ಸನ್ನದ್ಧವಾಗಿದೆ ಎಂದು ಹೇಳಿದ್ದಾರೆ.

<><><><>

ಲಕ್ನೋದ ಏಕಾನ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉತ್ತರಾಖಂಡ್ ವಿರುದ್ಧದ ರಣಜಿ ಸೆಮಿಫೈನಲ್ ಪಂದ್ಯದಲ್ಲಿ ಕರ್ನಾಟಕ ೬೩೨ ರನ್‌ಗಳ ಮುನ್ನಡೆ ಸಾಧಿಸಿದೆ. ನಾಲ್ಕನೇ ದಿನವಾದ ಇಂದು ಉತ್ತರಾಖಂಡ ಮೊದಲ ಇನ್ನಿಂಗ್ಸ್‌ನಲ್ಲಿ ಎಲ್ಲ ವಿಕೆಟ್ ಕಳೆದುಕೊಂಡು ೨೩೩ ರನ್ ಗಳಿಸಿತ್ತು. ೨ನೇ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ಇತ್ತೀಚಿನ ವರದಿ ಬಂದಾಗ ೪ ವಿಕೆಟ್ ನಷ್ಟಕ್ಕೆ ೧೨೯ ರನ್ ಗಳಿಸಿ ಆಡುತ್ತಿದೆ. ರಾಜ್ಯದ ಪರ ಮಯಾಂಕ್ ಅಗರ್ವಾಲ್ ೨೧, ಕರುಣ್ ನಾಯರ್ ೮ ರನ್ ಗಳಿಸಿದರೆ, ಶ್ರೇಯಸ್ ಗೋಪಾಲ್ ಯಾವುದೇ ರನ್ ಗಳಿಸದೆ ಔಟಾಗಿದ್ದಾರೆ.

<><><><>

ರಾಜ್ಯಾದ್ಯಂತ ದ್ವಿತೀಯ ಪಿ.ಯು.ಸಿ ಪರೀಕ್ಷೆಯು ಫೆಬ್ರವರಿ ೨೮ ರಿಂದ ಮಾರ್ಚ್ ೧೬ ರವರೆಗೆ ನಡೆಯಲಿದೆ. ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಪಾವಿತ್ರ್ಯತೆ ಕಾಪಾಡುವುದರೊಂದಿಗೆ ಗೊಂದಲಗಳಿಗೆ ಆಸ್ಪದ ನೀಡದೇ ವಿದ್ಯಾರ್ಥಿಗಳು ಸುಗಮವಾಗಿ ಪರೀಕ್ಷೆ ಬರೆಯಲು ಅನುವು ಮಾಡಿಕೊಡಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಸೂಚನೆ ನೀಡಿದ್ದಾರೆ. ಜಿಲ್ಲೆಯ ಒಟ್ಟು ೨೯ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ಕಲಾ, ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳಲ್ಲಿ ಒಟ್ಟು ೧೬ ಸಾವಿರದ ೧೮೧ ವಿದ್ಯಾರ್ಥಿಗಳು ಪರೀಕ್ಷೆಗೆ ಹೆಸರು ನೊಂದಾಯಿಸಿಕೊಂಡಿದ್ದಾರೆ. ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡಿದ್ದಲ್ಲಿ ಅಂತಹ ವ್ಯಕ್ತಿಗಳ ವಿರುದ್ಧ ಪೊಲೀಸ್ ಇಲಾಖೆ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>